12

ಇಲಾಖೆ / ವಿಷಯ : DEPARTMENT / SUBJECT: ಗೃಹ - ಸಿ.ಡಿ. ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE 29/3/21

### ಡಿ.ಕೆ.ಶಿವಕುಮಾರ್ ವಿರುದ್ಧ ಭುಗಿಲೆದ್ದ ಆಕ್ರೋಶ

# ಡಿಕೆಶಿ ಕಾರಿನ ಮೇಲೆ ಚಪ್ಪಲಿ, ಕಲ್ಲು ಎಸೆತ

## ಕಾಂಗ್ರೆಸ್ ಕಾರ್ಯಕರ್ತರ ವಾಹನಗಳೂ ಜಖಂ

**ವಿಶ್ವವಾಣಿ ಸುದ್ದಿಮನೆ** ಬೆಳಗಾವಿ/ಬೆಂಗಳೂರು

ಲೋಕಸಭಾ ಉಪ ಚುನಾವಣೆ ಹಿನ್ನೆಲೆಯಲ್ಲಿ ಬೆಳಗಾವಿಗೆ ಆಗಮಿಸಿದ್ದ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಕಾರಿನ ಮೇಲೆ ರಮೇಶ್ ಜಾರಕಿಹೊಳಿ ಬೆಂಬಲಿಗರು ಚಪ್ಪಲಿ, ಕಲ್ಲು ಎಸೆದಿದ್ದಾರೆ.

ಭಾನುವಾರ ಮಧ್ಯಾಹ್ನ ಮೂರು ಗಂಟೆಗೆ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಬಂದಿಳಿದ ಶಿವಕುಮಾರ್ ಅವರನ್ನು ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಸ್ವಾಗತಿಸಿದರು. ವಿಮಾನ ನಿಲ್ದಾಣದಿಂದ ಹೊರಬರುತ್ತಿದ್ದಂತೆ ರಮೇಶ್ ಜಾರಕಿಹೊಳಿ ಬೆಂಬಲಿಗರು ಶಿವಕುಮಾರ್ ಅವರ ಕಾರಿನ ಮೇಲೆ ಚಪ್ಪಲಿ ಮತ್ತು ಕಲ್ಲುಗಳ ತೂರಾಟ ನಡೆಸಿ, ಡಿಕೆಶಿ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಅಲ್ಲದೆ ಕಾಂಗ್ರೆಸ್ ಕಾರ್ಯಕರ್ತರ ವಾಹನಗಳ ಮೇಲೂ ಕಲ್ಲು ತೂರಿ ಆಕ್ರೋಶ ಹೊರಹಾಕಿದರು. ಈ ಸಂದರ್ಭದಲ್ಲಿ ಗುಂಪನ್ನು ಚದುರಿಸಲು ಪೊಲೀಸರು ಲಾಠಿ ಚಾರ್ಜ್ ಮಾಡಿದ್ದು, ಕೆಲವು ಜನರಿಗೆ ಗಂಭೀರ ಗಾಯಗಳಾಗಿವೆ.

**ಪೊಲೀಸರ ಮೇಲೆ ಹಲ್ಲೆಗೆ ಯತ್ನ:** ಡಿ.ಕೆ.ಶಿವಕುಮಾರ್ ವಿಮಾನ ನಿಲ್ದಾಣದಿಂದ ಹೊರಗೆ ಬರುವ ಸಂದರ್ಭದಲ್ಲಿ ಜಾರಕಿಹೊಳಿ ಅಭಿಮಾನಿಗಳು ಕಪ್ಪು ಬಟ್ಟೆ ಪ್ರದರ್ಶನ ಮಾಡಿ ಅಡ್ಡಗಟ್ಟಲು ಯತ್ನಿಸಿದರು. ಈ ವೇಳೆ ಅವರನ್ನು ತಡೆದ ಪೊಲೀಸ್ ಸಿಬ್ಬಂದಿ ಜತೆ ಕೆಲಕಾಲ ವಾಗ್ವಾದ ನಡೆದು, ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಯಿತು. ಕೆಲ ಕಿಡಿಗೇಡಿಗಳು ಪೊಲೀಸರ ಮೇಲೆಯೇ ಹಲ್ಲೆ ನಡೆಸಲು ಯತ್ನಿಸಿದರು. ಇದರಿಂದ ತಪ್ಪಿಸಿಕೊಳ್ಳಲು ಪೊಲೀಸರು ದಿಕ್ಕಾಪಾಲಾಗಿ ಓಡಿದರು.

**ದೂರಿನಿಂದ ಜಾರಿಕೊಂಡ ರಮೇಶ್:** ಸಿಡಿ ಯುವತಿಯ ಪೋಷಕರು ಡಿಕೆಶಿ ವಿರುದ್ಧ ಆರೋಪ ಮಾಡುತ್ತಿದ್ದಂತೆ ಪ್ರತ್ಯಕ್ಷವಾದ ಮಾಜಿ ಸಚಿವ ರಮೇಶ್ ಜಾರಕಿಹೊಳಿ, ಡಿಕೆಶಿ ವಿರುದ್ಧ ಹರಿಹಾಯ್ದಿದ್ದರು. ಮಾತಿನ ಭರದಲ್ಲಿ ಅಶ್ಲೀಲ ಪದವನ್ನು ಬಳಕೆ ಮಾಡಿ, ಕೊನೆಗೆ ಕ್ಷಮೆ ಕೋರಿದ್ದರು. ಜತೆಗೆ, ಡಿಕೆಶಿ ನನ್ನ ವಿರುದ್ಧ ಷಡ್ಯಂತ್ರ ಮಾಡಿದ್ದಾರೆ. ಈ ಸಂಬಂಧ ನಾನು ಎಸ್ ನೀಡಿ ಎರಡು ದಿನಗಳ ನಂತರ ದೂರು ನೀಡುವುದರಿಂದ ಹಿಂದೆ ಸರಿದಿದ್ದಾರೆ ಎನ್ನಲಾಗಿದೆ.

**ರಮೇಶ್ ಜಾರಕಿಹೊಳಿಗೆ ನೊಟೀಸ್:** ಯುವತಿಯ ದೂರಿನ ಹಿನ್ನೆಲೆಯಲ್ಲಿ ರಮೇಶ್ ಜಾರಕಿಹೊಳಿ ವಿರುದ್ಧ ಈವರೆಗೂ ಯಾವುದೇ ನೋಟಿಸ್ ನೀಡಿಲ್ಲ, ರೀತಿಯಲ್ಲಿಯೇ ಎಸ್ಐಟಿ ಕೆಲಸ ಮಾಡುತ್ತಿದೆ ಎಂದು ಪ್ರತಿಪಕ್ಷ ಕಾಂಗ್ರೆಸ್ ಆರೋಪ ಮಾಡಿದ್ದರಿಂದ ಇದೀಗ ರಮೇಶ್ ಜಾರಕಿಹೊಳಿ ಅವರಿಗೆ ಎಸ್ಐಟಿ ನೋಟಿಸ್ ನೀಡಿ, ಸೋಮವಾರ ವಿಚಾರಣೆಗೆ ಹಾಜರಾಗುವಂತೆ



ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದ ಬಳಿ ಡಿ.ಕೆ.ಶಿವಕುಮಾರ್ ಕಾರಿಗೆ ರಮೇಶ್ ಜಾರಕಿಹೊಳಿ ಬೆಂಬಲಿಗರು ಮುತ್ತಿಗೆ ಹಾಕಲು ಯತ್ನಿಸಿದರು.

### ನ್ಯಾಯಾಧೀಶರ ಮುಂದೆ ಇಂದು ಯುವತಿ ಹಾಜರ್?

ದಿನಕ್ಕೊಂದು ವಿಡಿಯೊ, ಆಡಿಯೊ ಬಿಡುಗಡೆ ಮಾಡುವ ಮೂಲಕ ಭಾರಿ ಕುತೂಹಲಕ್ಕೆ ಕಾರಣವಾಗಿರುವ ರಮೇಶ್ ಜಾರಕಿಹೊಳಿ ರಾಸಲೀಲೆ ಪ್ರಕರಣದ ಸಿಡಿ ಲೇಡಿ ಸೋಮವಾರ ನ್ಯಾಯಾಧೀಶರ ಮುಂದೆ ಹಾಜರಾಗಿ ಸ್ವಯಂ ಪ್ರೇರಿತ ಹೇಳಿಕೆ ನೀಡುವ ಸಾಧ್ಯತೆ ಇದೆ. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಬಹಿರಂಗಪಡಿಸಿರುವ ಯುವತಿ ಪರ ವಕೀಲ ಜಗದೀಶ್, ಯುವತಿ ನ್ಯಾಯಾಧೀಶರ ಮುಂದೆ ಹಾಜರಾಗಿ ನಿಯಮ 164ರ ಅಡಿ ಹೇಳಿಕೆ ನೀಡಲಿದ್ದಾರೆ. ಇದು ಇಡೀ ಪ್ರಕರಣಕ್ಕೆ ಹೊಸ ತಿರುವು ನೀಡಲಿದೆ ಎಂದಿದ್ದಾರೆ. ಸಿಡಿ ಪ್ರಕರಣಕ್ಕೆ ಸಂಬಂಧಿಸಿ ಜಾರಕಿಹೊಳಿ ವಿರುದ್ಧ ದಾಖಲಾಗಿರುವ ಅತ್ಯಾಚಾರ ಪ್ರಕರಣ ಸಂಬಂಧ ನ್ಯಾಯಾಲಯಕ್ಕೆ ಹಾಜರಾಗಿ ಹೇಳಿಕೆ ನೀಡುವಂತೆ ಯುವತಿಗೆ ಎರಡನೇ ನೋಟಿಸ್ ಜಾರಿಯಾಗಿದೆ.

- ರಮೇಶ್ ಜಾರಕಿಹೊಳಿಗೂ ಎಸ್ಐಟಿ ನೊಟೀಸ್
- ಬೆಳಗಾವಿಯಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣ
- ರಾಜ್ಯಾದ್ಯಂತ ಪರ-ವಿರೋಧ ಪ್ರತಿಭಟನೆಗಳು
- ಪೊಲೀಸರನ್ನೇ ಅಟ್ಟಾಡಿಸಿದ ರಮೇಶ್ ಬೆಂಬಲಿಗರು



ರಾಜಕೀಯದಲ್ಲಿ ಇದೆಲ್ಲ ಸಹಜ. ನಮಗೆ ಹೂವಿನ ಹಾರ ಹಾಕುವವರೂ ಇರ್ತಾರೆ, ಜೈಕಾರ ಹಾಕುವವರೂ ಇರ್ತಾರೆ, ಧಿಕ್ಕಾರ ಹಾಕುವವರೂ ಇರ್ತಾರೆ, ಕಲ್ಲು ಹೊಡೆಯುವವರೂ ಇರ್ತಾರೆ. ಹಿಂದೆ ಮೊಟ್ಟೆ ಎಸೆಯುತ್ತಿದ್ದರು. ಹಾಗೆಯೇ ಹೂವು, ಸೇಬಿನ ಹಾರವನ್ನೂ ಹಾಕ್ತಾರೆ. ಅವರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ.

**- ಡಿ.ಕೆ.ಶಿವಕುಮಾರ್** ಕೆಪಿಸಿಸಿ ಅಧ್ಯಕ್ಷ